ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೇಳನೇ ಅಧಿವೇಶನ

## (ಮುಂದುವರೆದ ಉಪವೇಶನ)

## ಸೋಮವಾರ, ದಿನಾಂಕ: ೨೩ನೇ ಮಾರ್ಚ್, ೨೦೧೫

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಅನುದಾನ ಕುರಿತು

ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –

೨೧೧ (೨೧೬೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದಿಂದ ಕಳೆದ ಎರಡು ವರ್ಷಗಳಿಂದ ಇಲ್ಲಿಯವರೆಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಈ ಇಲಾಖೆಯ ಅಧೀನದಲ್ಲಿರುವ ಸಂಸ್ಥೆಗಳಿಗೆ ಮೀಸಲಿಟ್ಟಿದ್ದ ಅನುದಾನವೆಷ್ಟು; ಇದರಲ್ಲಿ ಪ್ರತಿ ವರ್ಷಕ್ಕೆ ಬಳಕೆಯಾದ ಅನುದಾನದ ಮೊತ್ತವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಇಲಾಖೆಗೆ ಸರ್ಕಾರದಿಂದ ಮೀಸಲಿಟ್ಟ ಅನುದಾನ ಸಮರ್ಪಕವಾಗಿದೆಯೇ ಅಥವಾ ಕೊರತೆಯಿದೆಯೇ; ಕೊರತೆ ಇದ್ದಲ್ಲಿ ಇನ್ನೂ ಹೆಚ್ಚಿನ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಹಿಂದೆ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲಾಗಿದೆಯೇ; (ಬಳಕೆಯ ಜಿಲ್ಲಾವಾರು ವಿವರ ನೀಡುವುದು)

(ಇ) ಈ ಇಲಾಖೆಗೆ ಸರ್ಕಾರದಿಂದ ಮಂಜೂರಾದ ಅನುದಾನದಲ್ಲಿ ಯಾವ-ಯಾವ ಮತ್ತು ಎಷ್ಟು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ಪ್ರತಿ ಯೋಜನೆಯ ಹೆಸರು ಮತ್ತು ಅದಕ್ಕೆ ಮೀಸಲಿಟ್ಟಿರುವ ಅನುದಾನದ ಸಂಪೂರ್ಣ ವಿವರ ನೀಡುವುದು) ಇದರಿಂದ ಈ ಇಲಾಖೆಗೆ ಒಳಪಡುವ ಎಷ್ಟು ಜನರಿಗೆ ಅನುಕೂಲಕರವಾಗಿದೆ? (ಪ್ರತಿ ಯೋಜನೆಗೆ ಬಳಕೆಯಾಗಿರುವ ಅನುದಾನದ ಜಿಲ್ಲಾವಾರು ವಿವರ ನೀಡುವುದು)

## ಉಚಿತ ಬಸ್ ಪ್ರಯಾಣ ಸೌಲಭ್ಯ

**ಶ್ರೀ ಮಾನೆ ಶ್ರೀನಿವಾಸ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೧೨ (೨೨೪೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಯಾವ ಯಾವ ಚುನಾಯಿತ ಪ್ರತಿನಿಧಿಗಳಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಒದಗಿಸಲಾಗಿದೆ;

(ಆ) ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದ ಪ್ರತಿನಿಧಿಗಳಿಗೆ ಉಚಿತ ಬಸ್ ಪಾಸ್ ವ್ಯವಸ್ಥೆ ಕಲ್ಪಿಸಲಾಗಿದೆಯೇ;

(ಇ) ಇಲ್ಲದಿದ್ದಲ್ಲಿ, ಕಾರಣಗಳೇನು ?

## ಚಿಕ್ಕಮಗಳೂರು ಜಿಲ್ಲೆಯ ಆಯುಷ್ ಆಸ್ಪತ್ರೆ

**ಶ್ರೀಮತಿ ಎ.ವಿ. ಗಾಯತ್ರಿ ಶಾಂತೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೧೩ (೨೧೧೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಆಯುಷ್ ಆಸ್ಪತ್ರೆಗಳಿಗೆ ಯಾವ ಯಾವ ಹುದ್ದೆಗಳು ಮಂಜೂರಾಗಿವೆ;

(ಆ) ಪ್ರಸ್ತುತ ಆಸ್ಪತ್ರೆಗಳಲ್ಲಿ ಖಾಲಿಯಿರುವ ಹುದ್ದೆಗಳು ಎಷ್ಟು; (ಈ ಬಗ್ಗೆ ತಾಲ್ಲೂಕುವಾರು ವಿವರ ನೀಡುವುದು)

(ಇ) ಖಾಲಿ ಹುದ್ದೆಗಳನ್ನು ತುಂಬಲು ಕೈಗೊಂಡಿರುವ ಕ್ರಮಗಳೇನು?

## ಸರ್ಕಾರಿ ಆಸ್ಪತ್ರೆಗಳಲ್ಲಿ ವಿಶೇಷ ಘಟಕ ಯೋಜನೆ ಅಡಿ ಹಣ ಬಿಡುಗಡೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧೪ (೧೪೪೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಪ್ರತಿ ಜಿಲ್ಲಾ ಆಸ್ಪತ್ರೆಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೋಗಿಗಳ ಚಿಕಿತ್ಸೆಗಾಗಿ ವಿಶೇಷ ಘಟಕ ಯೋಜನೆ ಅಡಿಯಲ್ಲಿ ಪ್ರತಿ ಆಸ್ಪತ್ರೆಗಳಿಗೆ ಹಣ ಒದಗಿಸಲಾಗಿದೆಯೇ;

(ಆ) ಈ ಯೋಜನೆಯಡಿಯಲ್ಲಿ ೨೦೧೪–೧೫ನೇ ಸಾಲಿನಲ್ಲಿ ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಹಣ ನಿಗದಿಪಡಿಸಲಾಗಿದೆ; ಎಷ್ಟು ಹಣ ಖರ್ಚಾಗಿದೆ; ಖರ್ಚಾಗದೇ ಬಾಕಿ ಉಳಿದಿರುವ ಹಣ ಎಷ್ಟು?

# ಎಪಿಎಲ್, ಬಿಪಿಎಲ್ ಕಾರ್ಡುಗಳು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೧೫ (೨೧೭೯) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ನೇ ಸಾಲಿನಲ್ಲಿ ಹೊಸದಾಗಿ ಎಪಿಎಲ್, ಬಿಪಿಎಲ್ ಹಾಗೂ ಎಎವಾಯ್ ಕಾರ್ಡ್‌ಗಳನ್ನು ಮಾಡಿಕೊಳ್ಳಲು ಇಲಾಖೆಯಿಂದ ಅರ್ಜಿ ಆಹ್ವಾನಿಸಿದಾಗ, ಎಷ್ಟು ಜನ ಅರ್ಜಿ ಸಲ್ಲಿಸಿದ್ದಾರೆ; (ಜಿಲ್ಲಾವಾರು ವಿವರಣೆ ನೀಡಿ)

(ಆ) ೨೮.೦೨.೨೦೧೫ ರವರೆಗೆ ಎಷ್ಟು ಎಪಿಎಲ್, ಬಿಪಿಎಲ್ ಹಾಗೂ ಎಎವಾಯ್ ಕಾರ್ಡ್‌ಗಳನ್ನು ವಿತರಣೆ ಮಾಡಲಾಗಿದೆ; (ಜಿಲ್ಲಾವಾರು ವಿವರಣೆ ನೀಡಿ)

(ಇ) ಹೊಸ ಕಾರ್ಡ್‌ಗಳನ್ನು ವಿತರಣೆ ಮಾಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಿಳಂಬವಾಗುವುದಕ್ಕೆ ಕಾರಣಗಳೇನು; ಈ ವಿಳಂಬವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಸದರಿ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದೆ; ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾದ ಹುದ್ದೆಗಳೆಷ್ಟು ; (ವಿವರಣೆ ನೀಡಿ) ಈ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಏನು ಕ್ರಮ ಕೈಗೊಂಡಿದೆ;

(ಉ) ಸದರಿ ಇಲಾಖೆಯಲ್ಲಿ ಹೊಸ ಹುದ್ದೆಗಳನ್ನು ಸೃಜಿಸುವ ಅವಶ್ಯಕತೆ ಇದೆಯೇ; ಹಾಗಿದ್ದಲ್ಲಿ, ಸರ್ಕಾರ ಏನು ಚಿಂತನೆ ನಡೆಸಿದೆ ?

## ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಕೊಳವೆಬಾವಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧೬ (೨೧೩೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಐದು ವರ್ಷಗಳಿಂದ ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ಹಾಗೂ ಅಲ್ಪಸಂಖ್ಯಾತರ ನಿಗಮಕ್ಕೆ ಕೊಳವೆ ಬಾವಿಗಳಿಗಾಗಿ ಕೋರಿ ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಯಾವ ಯಾವ ನಿಗಮದಿಂದ ಪ್ರತಿ ವರ್ಷ ಕೊಳವೆ ಬಾವಿಗಳನ್ನು ಕೊರೆಸಲಾಗಿದೆ;

(ಇ) ಕೊರೆಸಲಾದ ಬಾವಿಗಳಿಗೆ ಪಂಪ್‌ಸೆಟ್‌ಗಳನ್ನು ವಿತರಿಸಿ, ವಿದ್ಯುತ್ ಸಂಪರ್ಕ ಒದಗಿಸಲಾಗಿದೆಯೇ;

(ಈ) ಇನ್ನುಳಿದ ಫಲಾನುಭವಿಗಳಿಗೆ ಯಾವಾಗ ಕೊಳವೆ ಬಾವಿ ಕೊರೆಸಲಾಗುವುದು ?

## ‘ಸೆಮಿ ಲೋ ಫ್ಲೋರ್’ ವಾಹನ ಖರೀದಿಯಲ್ಲಿ ಸಂಸ್ಥೆಗೆ ಆಗಿರುವ ನಷ್ಟ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧೭ (೨೨೧೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗಳಿಂದ ‘ಲೋ ಫ್ಲೋರ್ ಎತ್ತರವುಳ್ಳ ಬಸ್ಸುಗಳನ್ನು’ ಖರೀದಿಸಿರುವುದು ನಿಜವೇ;

(ಆ) ಹಾಗಿದ್ದರೆ, ಎಷ್ಟು ಬಸ್ಸುಗಳನ್ನು ಖರೀದಿಸಲಾಗಿತ್ತು; ಎಷ್ಟು ಹಣ ಈ ಬಾಬ್ತಿಗೆ ವೆಚ್ಚ ಮಾಡಲಾಗಿದೆ;

(ಇ) ಈ ಬಸ್ಸುಗಳನ್ನು ಕೊಂಡುಕೊಳ್ಳಲು ಅನುಸರಿಸಿದ ಮಾನದಂಡಗಳೇನು; ಈ ಬಸ್ಸುಗಳು ಹಾಲಿ ಸಂಸ್ಥೆಗೆ ಪ್ರಯೋಜನಕಾರಿಯಾಗಿ ಕೆಲಸ ಮಾಡುತ್ತಿವೆಯೇ; ಅಥವಾ ಈ ಬಸ್ಸುಗಳಲ್ಲಿ ಲೋಪದೋಷಗಳು ಕಂಡುಬಂದಿದೆಯೇ;

(ಈ) ಲೋಪದೋಷವಿದ್ದರೆ, ಸಾರಿಗೆ ಸಂಸ್ಥೆಗಳಿಗೆ ಆಗಿರುವ ನಷ್ಟವೇನು ? (ಪೂರ್ಣ ವಿವರ ಒದಗಿಸುವುದು)

## ಬಿ.ಎಂ.ಟಿ.ಸಿ. ಬಸ್‌ಗಳ ಸಂಖ್ಯೆ

ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –

೨೧೮ (೨೨೫೪) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಬಿಎಂಟಿಸಿ ಬಸ್‌ಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ೨೦೧೩–೧೪ರಲ್ಲಿ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಖರೀದಿಸಿರುವ ಬಸ್ಸುಗಳ ಸಂಖ್ಯೆ ಎಷ್ಟು;

(ಆ) ಪ್ರಸ್ತುತ ಬಿಎಂಟಿಸಿ ನಷ್ಟದಲ್ಲಿ ನಡೆಯುತ್ತಿರುವುದು ನಿಜವೇ; ಲಾಭ–ನಷ್ಟಗಳ ವಿವರ ನೀಡುವುದು;

(ಇ) ಬಿಎಂಟಿಸಿ ಬಸ್ಸುಗಳ ಬಣ್ಣ ಬದಲಾಯಿಸಲು ನಿರ್ಧರಿಸಿರುವುದು ನಿಜವೇ; ವಿವರ ನೀಡುವುದು; ಈ ನಿರ್ಧಾರಕ್ಕೆ ಕಾರಣವೇನು;

(ಈ) ಒಟ್ಟು ಎಷ್ಟು ಬಸ್ಸುಗಳಿಗೆ ಬಣ್ಣ ಬದಲಾಯಿಸಲು ನಿರ್ಧರಿಸಲಾಗಿದೆ ; ಇದಕ್ಕೆ ತಗಲುವ ಅಂದಾಜು ವೆಚ್ಚವೇನು ? ವಿವರ ನೀಡುವುದು

## ಪಡಿತರ ಚೀಟಿಗೆ ಆಧಾರ್ ಮತ್ತು ಗುರುತಿನ ಚೀಟಿ ಹೊಂದಾಣಿಕೆಯ ಗೊಂದಲದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೧೯ (೧೩೯೯) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಪಡಿತರ ಚೀಟಿಯೊಂದಿಗೆ ಮತದಾರರ ಗುರುತಿನ ಚೀಟಿ ಹೊಂದಾಣಿಕೆ ಮಾಡುವ ಕೆಲಸ ಕಾರ್ಯ ಪೂರ್ಣಗೊಂಡಿದೆಯೇ ; (ಈ ಬಗ್ಗೆ ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಮತದಾರರ ಗುರುತಿನ ಚೀಟಿಯೊಂದಿಗೆ ಪಡಿತರ ಚೀಟಿ ಹೊಂದಾಣಿಕೆಯಾಗದೆ ಕಾರ್ಡ್ ರದ್ದಾಗಿ, ಸಮಸ್ಯೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಗೊಂದಲದ ನಡುವೆಯೇ ಆಧಾರ್ ಸಂಖ್ಯೆಯೊಂದಿಗೂ ಹೊಂದಾಣಿಕೆ ಮಾಡಲು ಉದ್ದೇಶಿಸಲಾಗಿದೆಯೇ;

(ಈ) ಈಗಾಗಲೇ ಲಕ್ಷಾಂತರ ಪಡಿತರ ಚೀಟಿ ರದ್ದುಗೊಂಡು ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದು, ಆಧಾರ್ ಕಾರ್ಡ್ ಹೊಂದಾಣಿಕೆ ಬಗ್ಗೆ ಸಾರ್ವಜನಿಕರು ಆತಂಕಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಉ) ಮತದಾರರ ಗುರುತಿನ ಚೀಟಿ ಮತ್ತು ಆಧಾರ್ ಕಾರ್ಡ್ ಹೊಂದಿಲ್ಲದ ಕಾರಣಕ್ಕಾಗಿ ಪಡಿತರ ಚೀಟಿ ರದ್ದುಗೊಂಡಿರುವ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿ ಒದಗಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ದಿವಂಗತ ಡಿ. ದೇವರಾಜ ಅರಸುರವರ ಶತಮಾನೋತ್ಸವ ಆಚರಣೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೨೨೦ (೨೧೨೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಿವಂಗತ ಡಿ. ದೇವರಾಜ ಅರಸು, ಮಾಜಿ ಮುಖ್ಯಮಂತ್ರಿ ಇವರ ಶತಮಾನೋತ್ಸವವನ್ನು ಸರ್ಕಾರದಿಂದ ರಾಜ್ಯಾದ್ಯಂತ ಅದ್ದೂರಿಯಾಗಿ ಆಚರಣೆ ಮಾಡಲು ತೀರ್ಮಾನಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಶತಮಾನೋತ್ಸವವನ್ನು ಯಾವಾಗ ಆಚರಿಸಲಾಗುವುದು;

(ಇ) ದಿನಾಂಕ ನಿಗದಿ ಮಾಡಲಾಗಿದೆಯೇ; ಯಾವ ರೀತಿ ಆಚರಿಸಲಾಗುವುದು;

(ಈ) ಈಗಾಗಲೇ ಸಿದ್ಧತೆ ನಡೆದಿದೆಯೇ; ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು ?

## ಕೊಡಗು ಜಿಲ್ಲೆಯಲ್ಲಿ ಖಾಲಿಯಿರುವ ವೈದ್ಯಾಧಿಕಾರಿಗಳು

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨೧ (೨೧೧೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ಒಟ್ಟು ಎಷ್ಟು ಆರೋಗ್ಯ ಪ್ರಾಥಮಿಕ ಕೇಂದ್ರಗಳಿವೆ ಹಾಗೂ ಎಷ್ಟು ಸಾರ್ವಜನಿಕ ಆಸ್ಪತ್ರೆಗಳಿವೆ;

(ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮತ್ತು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಒಟ್ಟು ಎಷ್ಟು ವೈದ್ಯರ ಹುದ್ದೆಗಳು ಮಂಜೂರಾಗಿವೆ; ಅದರಲ್ಲಿ ಎಷ್ಟು ಖಾಲಿಯಿವೆ; (ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರವಾರು, ಸಾರ್ವಜನಿಕ ಆಸ್ಪತ್ರೆವಾರು ಸಂಪೂರ್ಣ ವಿವರ ನೀಡುವುದು)

(ಇ) ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಯಾವಾಗ ಭರ್ತಿ ಮಾಡಲಾಗುವುದು ? (ನಿಖರ ಮಾಹಿತಿ ನೀಡುವುದು)

## ಖಾಸಗಿ ಆಸ್ಪತ್ರೆಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೨೨ (೨೨೪೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಆ) ಈ ಆಸ್ಪತ್ರೆಗಳಲ್ಲಿರುವ ರೋಗಿಗಳಿಗೆ ನೀಡುವ ಚಿಕಿತ್ಸೆಗಳ ದರಪಟ್ಟಿ ಪ್ರಕಟಿಸಲಾಗಿದೆಯೇ;

(ಇ) ಪ್ರಕಟಿಸಿದ್ದರೆ, ಯಾವ ಮಾನದಂಡದ ಮೇಲೆ ಈ ದರ ನಿರ್ಧರಿಸಲಾಗಿದೆ;

(ಈ) ಬೆಂಗಳೂರಿನಲ್ಲಿರುವ ಖಾಸಗಿ ಆಸ್ಪತ್ರೆಗಳು ರೋಗಿಗಳಿಂದ ದುಬಾರಿ ಚಿಕಿತ್ಸಾ ಶುಲ್ಕ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದರೆ, ಅಂತಹ ಆಸ್ಪತ್ರೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಹೊಸ ಬಸ್ಸುಗಳನ್ನು ಖರೀದಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨೩ (೨೧೪೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಹೊಸ ಬಸ್ಸುಗಳನ್ನು ಖರೀದಿಸಲಾಗಿದೆ;

(ಆ) NWKSRT ವಲಯಕ್ಕೆ ಒಟ್ಟು ಎಷ್ಟು ಹೊಸ ಬಸ್ಸುಗಳನ್ನು ನೀಡಲಾಗಿದೆ ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ವಲಯಗಳು ಲಾಭದಲ್ಲಿವೆ ಮತ್ತು ನಷ್ಟದಲ್ಲಿವೆ; (ಸಂಪೂರ್ಣ ವಿವರ ನೀಡುವುದು)

(ಈ) ನಷ್ಟದಲ್ಲಿರುವ ವಲಯಗಳನ್ನು ಲಾಭದಲ್ಲಿ ತರಲು ಏನು ಕ್ರಮ ಜರುಗಿಸಲಾಗಿದೆ ?

## ಉಡುಪಿ ಜಿಲ್ಲೆಯಲ್ಲಿನ ಆಹಾರ ಪರಿವೀಕ್ಷಕರ ಹುದ್ದೆ

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೨೪ (೨೨೪೪) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಹಾರ ಪರಿವೀಕ್ಷಕರ ಸಂಖ್ಯೆ ಎಷ್ಟು; ಮತ್ತು ಮಂಜೂರಾದ ಆಹಾರ ಪರಿವೀಕ್ಷಕರ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; ಈ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಲಬೆರಕೆ, ವಿಷಪೂರಿತ ಆಹಾರಗಳು ವ್ಯಾಪಕವಾಗಿ ಮಾರಾಟವಾಗುತ್ತಿದ್ದರೂ ಸಹ, ಇಲಾಖೆ ಹಿಡಿತ ಸಾಧಿಸಲಾಗದೆ ಇರಲು ಕಾರಣವೇನು; ಇದನ್ನು ಹತೋಟಿಗೆ ತರಲು ಇಲಾಖೆಯ ಯೋಜನೆಗಳೇನು;

(ಇ) ಕೋಳಿ ಸಾಕಾಣಿಕೆ ಕೇಂದ್ರಗಳಲ್ಲಿ ಕೋಳಿಗಳ ಶೀಘ್ರ ಬೆಳವಣಿಗೆಗೆ ನೀಡಲಾಗುತ್ತಿರುವ ವಿಷಪೂರಿತ ಚುಚ್ಚುಮದ್ದುಗಳಿಂದ ಅಂತಹ ಕೋಳಿ ಮಾಂಸ ತಿನ್ನುವ ಮನುಷ್ಯರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದು ವೈಜ್ಞಾನಿಕವಾಗಿ ದೃಢಪಟ್ಟಿರುವುದು ನಿಜವೇ; ನಿಜವಾದಲ್ಲಿ, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ?

## ಕುಣಬಿ ಸಮಾಜ ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೨೫ (೨೧೧೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕನ್ನಡ ಜಿಲ್ಲೆಯ ದಟ್ಟ ಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗವು ಬುಡಕಟ್ಟು ಸಂಸ್ಕೃತಿಯ ಎಲ್ಲಾ ಗುಣಲಕ್ಷಣಗಳನ್ನು ಹೊಂದಿದ್ದು, ಪರಿಶಿಷ್ಟ

(ಆ) ಸರ್ಕಾರಿ ಆದೇಶ ಸಂಖ್ಯೆ : ಸಕಿ ೧೮೫ ಎಸ್ಎಡಿ ೨೦೧೨, ದಿ: ೨೨.೦೫.೨೦೧೪ರಲ್ಲಿ ಕುಣಬಿ ಜನಾಂಗದ ಕುಲಶಾಸ್ತ್ರಿ ಅಧ್ಯಯನಕ್ಕಾಗಿ ನೇಮಿಸಿದ್ದ ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು ಇವರಿಂದ ವರದಿ ಸ್ವೀಕೃತವಾಗಿದೆಯೇ; (ವಿವರ ನೀಡುವುದು)

(ಇ) ಸ್ವೀಕರಿಸಿದ್ದಲ್ಲಿ, ಸದರಿ ವರದಿಯನ್ನು ಪರಿಶೀಲಿಸಿ, ಕೈಗೊಂಡಿರುವ ಕ್ರಮಗಳೇನು ?

ವಿ. ಶ್ರೀಶ್

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು